## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ. ಮಂಗಳಪ್ಪ ನಾಯಕ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/BD/4139/2014/DRE-1, ದಿನಾಂಕ: 25.01.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 20/23.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

1. ಶ್ರೀ. ಹೆಚ್. ನಾಗರಾಜ್ ಬಿನ್ ಹೊನ್ನಪ್ಪ, ಹದಡಿ ಅಂಚೆ, 7ನೇ ಕಲ್ಲು, ದಾವಣಗೆರೆ ತಾಲ್ಲೂಕು, ಮತ್ತು ಜಿಲ್ಲೆ ರವರು ಸರ್ಕಾರಿ/ಸಾರ್ವಜನಿಕ ನೌಕರರಾದ ಶ್ರೀ. ಮಂಗಳಪ್ಪ ನಾಯಕ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

2. ದೂರುದಾರರು ತಮ್ಮ ದೂರಿನಲ್ಲಿ ಎದುರುದಾರರು ಸರ್ಕಾರದ ವಿವಿಧ ಯೋಜನೆಗಳಲ್ಲಿ ಬಿಡುಗಡೆಯಾದ ಅನುದಾನವನ್ನು ಸಮರ್ಪಕವಾಗಿ ಬಳಕೆ ಮಾಡದೆ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ತನ್ನ ಕುಟುಂಬದ ಸದಸ್ಯರು ಮತ್ತು ಸ್ನೇಹಿತರ ಹೆಸರಿಗೆ ಸಂಭಾವನೆಗಿಂತ ಆಕ್ರಮ ಆಸ್ತಿಯನ್ನು ಹೊಂದಿರುತ್ತಾರೆಂದು ಆಪಾದಿಸಿ ದೂರನ್ನು ಸಲ್ಲಿಸಿರುತ್ತಾರೆ.

3. ದೂರುದಾರರ ದೂರಿನ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ದಾವಣಗೆರೆ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಿಗೆ ಆದೇಶಿಸಲಾಗಿತ್ತು. ಪೊಲೀಸ್ ಅಧೀಕ್ಷಕರು ತಮ್ಮ ವರದಿಯಲ್ಲಿ ವಿಚಾರಣಾಧಿಕಾರಿಯವರು ಎದುರುದಾರರ ಬಗ್ಗೆ ಗೌಪ್ಯವಾಗಿ ಮಾಹಿತಿ ಸಂಗ್ರಹಿಸಿದ್ದು, ಅವರ ಒಟ್ಟು ಖರ್ಚು ಮತ್ತು ಆದಾಯಗಳ ಲೆಕ್ಕ ಹಾಕಲಾಗಿದ್ದು, ಅವರು ತಮ್ಮ ಸರ್ಕಾರಿ ಸೇವಾ ಅವಧಿಯಲ್ಲಿ ಗಳಿಸಿರುವ ಅಂದಾಜು ಆಸ್ತಿ ರೂ. 3,66,650/- ಅವರು ಮಾಡಿರಬಹುದಾದ ಅಂದಾಜು ವೆಚ್ಚ ರೂ. 3,25,000/-, ಅವರ ಒಟ್ಟು ಆಸ್ತಿ ಮತ್ತು ವೆಚ್ಚ ರೂ. 6,91,650/- ಅವರು ಗಳಿಸಿರಬಹುದಾದ ಅಂದಾಜು ಆದಾಯ ರೂ. 11,00,000/- ಅವರ ಅಸಮತೋಲನಸ ಆಸ್ತಿಯ ಮೌಲ್ಯ ರೂ. 4,08,350/-ಆಗಿದ್ದು ಶೇಕಡಾವಾರು -37.12 ಆಗಿರುತ್ತದೆ. ಸದರಿಯವರು ತಮ್ಮ ಕುಟುಂಬದ ಹೆಸರಿನಲ್ಲಿ ಯಾವುದೇ ಬಾನಾಮಿ ಆಸ್ತಿ ಹೊಂದಿರುವುದು ವಿಚಾರಣಾ ವರದಿಯಲ್ಲಿ

ಕಂಡುಬಂದಿರುವುದಿಲ್ಲ. ಸದ್ಯಕ್ಕೆ ಇದೊಂದು ಉತ್ತಮವಾದ ಅಸಮತೋಲನ ಆಸ್ತಿ ಗಳಿಕೆ ಪ್ರಕರಣವಾಗಿ ದೃಢಪಟ್ಟಿರುವುದಿಲ್ಲವೆಂದು ಹೇಳಿರುತ್ತಾರೆ.

4. ತನಿಖಾಧಿಕಾರಿಯ ವರದಿಯ ಮೇಲೆ ಎದುರುದಾರರು ಆಕ್ಷೇಪಣೆಯನ್ನು ಸಲ್ಲಿಸಿದ್ದು, ಅವರು 2013 ರಲ್ಲಿ ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನ ಹನುಮಸಾಗರ ಗ್ರಾಮದಲ್ಲಿ ಖಾಲಿ ನಿವೇಶನವನ್ನು ಕ್ರಯಕ್ಕೆ ಪಡೆದಿದ್ದು, ನೂತನವಾಗಿ ಸೇವೆಗೆ ಸೇರಿದ್ದರಿಂದ ಸ್ವತ್ತು ಖರೀದಿಸಲು ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯಬೇಕೆಂಬ ಮಾಹಿತಿ ತಿಳಿದಿರಲಿಲ್ಲ. ಆದಾಗ್ಯೂ2014–15ನೇ ಸಾಲಿನಲ್ಲಿ ಚರ ಮತ್ತು ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ನೀಡಲಾಗುವ ಆಸ್ತಿ ಘೋಷಣಾ ಪಟ್ಟಿಯನ್ನು ಕಾರ್ಯನಿರ್ವಹಣಾ ಪಟ್ಟಿಯೊಂದಿಗೆ ಸರ್ಕಾರಕ್ಕೆ ಸಲ್ಲಿಸಲಾಗಿದೆ. ದೂರುದಾರರ ದೂರು ಆಧಾರ ರಹಿತವಾಗಿರುತ್ತದೆಯೆಂದು ಹೇಳಿರುತ್ತಾರೆ.

5. ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ದಿ. 10.10.2011 ರಂದು ಒಂದು ಮನೆ ನಿವೇಶನವನ್ನು ಹಾಗೂ ದಿ. 17.01.2014 ರಂದು ಇನ್ನೊಂದು ಮನೆ ನಿವೇಶನವನ್ನು ಎದುರುದಾರರು ಖರೀದಿ ಮಾಡಿರುವುದು ಕಂಡುಬರುತ್ತದೆ. ಸದರಿ ಸ್ವತ್ತುಗಳನ್ನು ಖರೀದಿಸಲು ಇಲಾಖಾ ಅನುಮತಿಯನ್ನು ಪಡೆದಿರುವುದಿಲ್ಲವೆಂದು ಎದುರುದಾರರು ತಿಳಿಸಿರುತ್ತಾರೆ. ಆದರೆ, ಸದರಿ ನಿವೇಶನಗಳನ್ನು ಯಾವ ಆದಾಯದಿಂದ ಖರೀದಿ ಮಾಡಿರುತ್ತಾರೆನ್ನುವ ಬಗ್ಗೆ ಎದುರುದಾರರು ಯಾವುದೇ ವಿವರಣೆಯನ್ನು ನೀಡಿರುವುದಿಲ್ಲ. ಮನೆ ನಿವೇಶನವನ್ನು ಖರೀದಿಸಲು ಯಾವ ಆದಾಯದ ಮೂಲವನ್ನು ಬಳಸಿಕೊಂಡಿರುತ್ತಾರೆಂದು ಎದುರುದಾರರು ಯಾವುದೇ ವಿವರಣೆ ನೀಡದೆ ಇರುವ ಕಾರಣ ಮತ್ತು ನಿವೇಶನಗಳನ್ನು ಖರೀದಿಸಲು ಇಲಾಖಾ ಅನುಮತಿ ಪಡೆಯದೇ ಇರುವ ಕಾರಣ ಮೇಲ್ನೋಟಕ್ಕೆ ಎದುರುದಾರರು ಅಕ್ರಮ ಆಸ್ತಿ ಹೊಂದಿರುವುದು ಕಂಡುಬರುತ್ತದೆ. ಎದುರುದಾರರು ಇಲಾಖೆಯಿಂದ ಅನುಮತಿ ಪಡೆಯದೆ ಮನೆ ನಿವೇಶನ ಖರೀದಿ ಮಾಡಿರುವುದು ಕರ್ನಾಟಕ ನಾಗರೀಕ ಸೇವಾ ನಿಯಮಗಳ ಉಲ್ಲಂಘನೆಯಾಗುತ್ತದೆ. ಆ ಕಾರಣಗಳಿಂದ ಎದುರುದಾರರು ನೀಡಿರುವ ಆಕ್ಷೇಪಣೆಯನ್ನು ಒಪ್ಪಿಕೊಳ್ಳಲು ಯಾವುದೇ ಆಧಾರವಿಲ್ಲ.

6. ಆದುದರಿಂದ, ಎದುರುದಾರರ ಆಕ್ಷೇಪಣೆಯು ಅವರ ಮೇಲಿನ ಆಪಾದನೆಯನ್ನು ಅಲ್ಲಗಳೆಯಲು ಸೂಕ್ತ ಅಥವಾ ಸಮಾಧಾನಕರವಾಗಿರುವುದಿಲ್ಲ ಮತ್ತು ದೂರುದಾರರ ದೂರನ್ನು ಹಾಗೂ ತನಿಖಾಧಿಕಾರಿಯ ವರದಿಯನ್ನು ಅಲ್ಲಗಳೆಯಲು ಯಾವುದೇ ಸಮಂಜಸ/ಸಮರ್ಪಕ ಉತ್ತರವನ್ನು ತಮ್ಮ ಆಕ್ಷೇಪಣೆಯಲ್ಲಿ ನೀಡಿಲ್ಲವೆಂಬ ಅಭಿಪ್ರಾಯಕ್ಕೆ ಬಂದಿದೆ.

7. ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಣನೆಗೆ ತೆದುಕೊಂಡಾಗ, ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿ ಮನೆ ನಿವೇಶನಗಳನ್ನು ಖರೀದಿಸುವಾಗ ಇಲಾಖೆಯಿಂದ ಅನುಮತಿ ಪಡೆಯದೆ ಕೆ.ಸಿ.ಎಸ್.ಆರ್ ಸೇವಾ ನಿಯಮಗಳನ್ನು ಉಲ್ಲಂಘನೆ ಮಾಡಿರುವುದು ಸ್ಪಷ್ಟವಾಗಿ ಕಂಡುಬರುತ್ತದೆ.

ಈ ಹಿನ್ನೆಲೆಯಲ್ಲಿ ಶ್ರೀ. ಮಂಗಳಪ್ಪ ನಾಯಕ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ

ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ)ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/81/ಗ್ರಾಪಂಕಾ/2017 ಬೆಂಗಳೂರು, ದಿನಾಂಕ-20-03-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ. ಮಂಗಳಪ್ಪ ನಾಯಕ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಾವಣಗೆರೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
6. ಶ್ರೀ. ಮಂಗಳಪ್ಪ ನಾಯಕ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಹನುಮಸಾಗರ ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಗಣಕಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.